ಕರ್ನಾಟಕ ಸರಕಾರ

# ಜಿಲ್ಲಾ ಪಂಚಾಯತ್, ಚಿತ್ರದುರ್ಗ

ಸಂಖ್ಯೆ : ಜಿಪಂ/ಆ(2)ಗ್ರಾಪಂ/ಸಿ.ಆರ್-66/2024-25 ದಿನಾಂಕ:06.01.2025

## :: ಅಧಿಸೂಚನೆ ::

**ವಿಷಯ**: ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಕರವಸೂಲಿಗಾರ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಕುರಿತು.

**ಉಲ್ಲೇಖ**:1. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 886 ಗ್ರಾಪಂಕಾ 2016 ದಿನಾಂಕ:29.09.2020

2. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಕೆಪಿಆರ್‌ಸಿ-ಜಿಪಿಎ/134/2024 ದಿ:26.06.2024
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 2 ಸೆಹಿಮ 2023, ದಿನಾಂಕ:08.03.2023.
4. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/02/ಸಹಿಮ/2025 ದಿನಾಂಕ:03.09.2025
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:28.10.2025 ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡವಳಿಯನ್ವಯ

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ಗ್ರಾಮ ಪಂಚಾಯತಿಗಳಲ್ಲಿ ವಿವಿಧ ಕಾರಣಗಳಿಂದಾಗಿ ಖಾಲಿ ಇರುವ ಹುದ್ದೆಗಳಿಗೆ ಉಲ್ಲೇಖ(1)ರಿಂದ (4)ರ ಸರ್ಕಾರದ ಅಧಿಸೂಚನೆಯಲ್ಲಿ ಸೂಚಿಸಿರುವಂತೆ, ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ನಿರ್ದೇಶನವನ್ನು ನೀಡಲಾಗಿರುತ್ತದೆ.

ಸರ್ಕಾರದ ಆದೇಶದಂತೆ ಉಲ್ಲೇಖ (5) ರಲ್ಲಿ ನೇರ ನೇಮಕಾತಿ ಮಾಡುವ ಕುರಿತು ರೋಸ್ಟರ್ ಬಿಂದುಗಳನ್ನು ಗುರುತಿಸಲಾಗಿದೆ. ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ ಈ ಕೆಳಕಂಡ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಕರವಸೂಲಿಗಾರ ಹುದ್ದೆಗಳಿಗೆ ನೇರ ನೇಮಕಾತಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಚಿತ್ರದುರ್ಗ ಜಿಲ್ಲೆಯ ವೆಬ್ ಸೈಟ್ chitradurga.nic.inರಲ್ಲಿ ಅರ್ಜಿಗಳನ್ನು ಅಗತ್ಯ ದೃಢೀಕರಿಸಿದ ದಾಖಲೆಗಳೊಂದಿಗೆ ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕ: 08.02.2026 ರೊಳಗಡೆ ಸಲ್ಲಿಸತಕ್ಕದ್ದು.

**ಚಿತ್ರದುರ್ಗ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಕರವಸೂಲಿಗಾರ ಹುದ್ದೆಗಳಿಗೆ ಉಲ್ಲೇಖ (3) ಮತ್ತು (4) ರಂತೆ ರೋಸ್ಟರ್ ಬಿಂಧು ಲಂಬ ಮತ್ತು ಸಮತಲ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಗಿನಂತೆ ಇದೆ.**

# ಕರವಸೂಲಿಗಾರ

| ಕ್ರ.ಸಂ. | ಗ್ರಾಮ ಪಂಚಾಯಿತಿ ಹೆಸರು | ತಾಲ್ಲೂಕು ಹೆಸರು | ಮೀಸಲಾತಿ ವಿವರ | | |
|---|---|---|---|---|---|
| | | | ಹುದ್ದೆ ಖಾಲಿಯಾದ ದಿನಾಂಕ | ಮೀಸಲಾತಿ ಬಿಂದು ಲಂಬ (Vertical) | ಸಮತಲ (Horizontal) |
| 1 | ಮೈಲನಹಳ್ಳಿ | ಚಳ್ಳಕೆರೆ | 22-08-2012 | ಪ.ಜಾತಿ-ಎ | ಇತರೆ |
| 2 | ಹಿರೇಹಳ್ಳಿ | ಚಳ್ಳಕೆರೆ | 26-08-2017 | ಸಾ.ಅ | ಇತರೆ |
| 3 | ಸಿರಿಗೆರೆ | ಚಿತ್ರದುರ್ಗ | 01-03-2018 | ಪ.ಪಂ | ಇತರೆ |
| 4 | ಸಾಣಿಕೆರೆ | ಚಳ್ಳಕೆರೆ | 16-07-2018 | ಸಾ.ಅ | ಮ.ಅ |
| 5 | ತಂಡಗ | ಹೊಸದುರ್ಗ | 14-02-2019 | ಪ್ರವರ್ಗ-I | ಇತರೆ |
| 6 | ಆರ್.ನುಲೇನೂರು | ಹೊಳಲ್ಕೆರೆ | 01-01-2020 | ಸಾ.ಅ | ಗ್ರಾ.ಅ |
| 7 | ದೊಡ್ಡೇರಿ | ಚಳ್ಳಕೆರೆ | 28-09-2020 | ಪ್ರವರ್ಗ-II (ಎ) | ಇತರೆ |
| 8 | ಜಾಜೂರು | ಚಳ್ಳಕೆರೆ | 07-10-2022 | ಸಾ.ಅ | ಅಂ.ವಿ |
| 9 | ಗನ್ನಾಯನಕನಹಳ್ಳಿ | ಹಿರಿಯೂರು | 19-10-2022 | ಪ.ಜಾತಿ-ಬಿ | ಇತರೆ |

1) **ಶೈಕ್ಷಣಿಕ ವಿದ್ಯಾರ್ಹತೆ :**

ಕನ್ನಡವನ್ನು ಒಂದು ಬಾಷೆಯಾಗಿ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಕಂಪ್ಯೂಟರ್ ತರಬೇತಿ ಕೋರ್ಸ್ ನಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ತರಬೇತಿ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು. (ಕರವಸೂಲಿಗಾರ ಹುದ್ದೆಗೆ ಕನಿಷ್ಠ 03 )

- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ಹಾಗೂ ಕಂಪ್ಯೂಟರ್ ತರಬೇತಿ ಕೋರ್ಸ್ ಪ್ರಮಾಣ ಪತ್ರದ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

2) **ವಾಸ ಸ್ಥಳ :**

ಗ್ರಾಮ ಪಂಚಾಯತಿ ಕರವಸೂಲಿಗಾರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಈ ಬಗ್ಗೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರ ಇವರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು ಮತ್ತು ಆಧಾರ್ ಕಾರ್ಡ್, ರೇಷನ್ ಕಾರ್ಡ್, ವೋಟರ್ ಐಡಿ ದಾಖಲೆಗಳನ್ನು ಸಲ್ಲಿಸತಕ್ಕದ್ದು

3) **ವಯೋಮಿತಿ :**

- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 08.02.2026 ಕ್ಕೆ ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂ ಇರತಕ್ಕದ್ದು.

| | | |
|---|---|---|
| ಎ | ಸಾಮಾನ್ಯ ವರ್ಗ | 18 ರಿಂದ 35 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 18 ರಿಂದ 38 ವರ್ಷ |
| ಸಿ | ಪ.ಜಾತಿ / ಪ.ಪಂ / ಪ್ರವರ್ಗ-1 | 18 ರಿಂದ 40 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರೀಕಾ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ಧಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು. ಪ್ರಸ್ತುತ ಸರ್ಕಾರದ ಸುತ್ತೋಲೆ ಪ್ರಕಾರ ನಿಗಧಿ ಪಡಿಸಿದ ವಯೋಮಿತಿಗೆ 03 ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗಿದೆ.

- **ಮಾಜಿ ಸೈನಿಕ** : ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.

**4) ಜನ್ಮ ದಿನಾಂಕ :**

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ದಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

**5) ಅರ್ಜಿ ಸಲ್ಲಿಸುವ ವಿಧಾನ :**

ನಿಗದಿತ ಅರ್ಜಿಯನ್ನು ಭರ್ತಿಮಾಡಿ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ನೇರವಾಗಿ ಜಿಲ್ಲೆಯ ವೆಬ್‌ಸೈಟ್ chitradurga.nic.in ನಲ್ಲಿ ಮಾತ್ರ Upload ಮಾಡುವುದು ಭೌತಿಕವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದಲ್ಲ.

**6) ಅರ್ಜಿ ಶುಲ್ಕ :**

ಗ್ರಾಮ ಪಂಚಾಯತಿ ಕರವಸೂಲಿಗಾರ ಹುದ್ದೆಗೆ ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ ಅರ್ಜಿ ಶುಲ್ಕ ಇರುವುದಿಲ್ಲ.

**7) ಜಾತಿ ಮೀಸಲಾತಿ ಪ್ರಮಾಣ ಪತ್ರ :**

ನಿಗಧಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಶೀಲ್ದಾರ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಡೆ ಪಡೆದಿರಬೇಕು.

**8) ಆಯ್ಕೆ ವಿಧಾನ :**

- ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಶೇಕಡ 50% ಅಂಕಗಳನ್ನು ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಡೆದ ಶೇಕಡ 50% ಅಂಕಗಳನ್ನು ಒಳಗೊಂಡಿರುವ
ಅರ್ಹತೆಯ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.
- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ

ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟ್ ನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

9) **ಸರ್ಕಾರದ ನಿರ್ದೇಶನದಂತೆ:** ಗ್ರಾಮ ಪಂಚಾಯತಿ ಕರವಸೂಲಿಗಾರ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

10) ಕ್ರ.ಸಂ.(22) ರಲ್ಲಿನ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಮಾಜಿ ಸೈನಿಕ ಸಮತಲ ಮೀಸಲಾತಿ ನಿಗದಿಪಡಿಸಲಾಗಿದ್ದು, ಮಾಜಿಸೈನಿಕ ಇಲ್ಲದಿದ್ದಲ್ಲಿ ಮಹಿಳಾ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.

**ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ ಸಲ್ಲಿಸುವುದು.
- ಹುದ್ದೆಗೆ ನಿಗಧಿಪಡಿಸಿದಂತೆ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಿಂದ ಕನಿಷ್ಠ 3 ಅಥವಾ 6 ತಿಂಗಳ ತರಬೇತಿ ಹೊಂದಿದ ಗಣಕಯಂತ್ರ ಪ್ರಮಾಣ ಪತ್ರ ಸಲ್ಲಿಸುವುದು.
- ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೊಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಪುರುಷ ಮತ್ತು ಮಹಿಳಾ ವ್ಯಕ್ತಿಯು ಎರಡನೆಯ ಮದುವೆಯಾಗಿದ್ದರೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದಿದ್ದರೆ ಅಂತಹ ನೇಮಕಾತಿಗೆ ಅರ್ಹರಾಗುವುದಿಲ್ಲ

- ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

| **ಅರ್ಜಿಗಳನ್ನು ಪ್ರಾರಂಭ ಮಾಡುವ ದಿನಾಂಕ** | **ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ** |
|---|---|
| **09.01.2026** | **08.02.2026** |

- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ. ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.
- ಹೆಚ್ಚಿನ ವಿವರಗಳಿಗಾಗಿ ಚಿತ್ರದುರ್ಗ ಜಿಲ್ಲೆಯ ವೆಬ್‌ಸೈಟ್ chitradurga.nic.in ರಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: 9448224723 ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
- ಅರ್ಜಿದಾರರು ಮೀಸಲಾತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದ್ದು.

**ಅಗತ್ಯ ದಾಖಲೆಗಳು:**

1. Paasport size photo (under 25 KB JPG format )
2. Sslc Marksheet (under 1MB Pdf format)
3. PUC or Equivalent marksheet (under 1MB Pdf format)
4. Domicile certificate (under 1MB Pdf format)
5. Caste and income certificate (under 1MB Pdf format)
6. Ex serviceman certificate (under 1MB Pdf format)

7. Handicapped certificate (under 1MB Pdf format)

8. Computer certificate (under 1MB Pdf format)

9. Transgender certificate (under 1MB Pdf format)

10. No Police case (self Declaration) certificate (under 1MB Pdf format)

**ವಿಶೇಷ ಸೂಚನೆ :** ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗಧಿತ ಶೈಕ್ಷಣಿಕ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುವುದಿಲ್ಲ. ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಸಲ್ಲಿಸುವುದು ತಪ್ಪಿದ್ದಲ್ಲಿ ಅವರ ಮೀಸಲಾತಿ /ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.

06/01/2026

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
**ಚಿತ್ರದುರ್ಗ ಜಿಲ್ಲಾ ಪಂಚಾಯತ್,**
**ಚಿತ್ರದುರ್ಗ**

**ಪ್ರತಿಯನ್ನು :**

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು, ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಇವರಿಗೆ ಮಾಹಿಗಾಗಿ ಸಲ್ಲಿಸಿದೆ.
3) ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿಗಳು, ಚಿತ್ರದುರ್ಗರವರಿಗೆ chitradurga.nic.in ರ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
4) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್, ಚಿತ್ರದುರ್ಗ/ ಚಳ್ಳಕೆರೆ / ಹಿರಿಯೂರು / ಹೊಳಲ್ಕೆರೆ /ಹೊಸದುರ್ಗ /ಮೊಳಕಾಲ್ಮೂರು
5) ಕಛೇರಿ ಪ್ರತಿ.

# -:ಸ್ವಯಂ ದೃಡೀಕರಣ:-

ಶ್ರೀ/ಶ್ರೀಮತಿ/ಕು|| ____________________ ಆದ ನಾನು ________________

ಗ್ರಾಮ________________, __________________ ತಾಲ್ಲೂಕಿನ ವಾಸಿಯಾಗಿದ್ದು,

ನನ್ನ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆಗಳು ಇರುವುದಿಲ್ಲವೆಂದು ಸ್ವಯಂ

ದೃಡೀಕರಿಸಿದೆ.

**ಸಹಿ/-**

**(ಹೆಸರು: )**